155 session ದಿ:- 11-03-2025 Sl. No :- 44

ವಿಷಯ: 44 ಕೋಟಿ ಭಾರತೀಯರಿಗೆ ಬೊಜ್ಜಿನ ಆತಂಕ ಪರಿಸ್ಥಿತಿ ಸಾಧ್ಯತೆ ಬಗ್ಗೆ ಲ್ಯಾನ್ಸೆಟ್ ವರದಿಯು ತನ್ನ ಜಾಗತಿಕ ವಿಶ್ಲೇಷಣೆಯಲ್ಲಿ ಬಹಿರಂಗಪಡಿಸಿರುವ ಹಿನ್ನೆಲೆಯಲ್ಲಿ ನಮ್ಮ ರಾಜ್ಯ ಎಚ್ಚೆತ್ತುಕೊಳ್ಳುವ ಬಗ್ಗೆ, ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ಕೋರಿ.

ಉಲ್ಲೇಖ: (1) ಸರ್ಕಾರದ ಅಧೀನ ಕಾರ್ಯದರ್ಶಿ, ಆ.ಕು.ಕ ಇಲಾಖೆ, (ಆರೋಗ್ಯ 1 & 2), ವಿಕಾಸ ಸೌಧ, ಬೆಂಗಳೂರು ರವರ ಪತ್ರದ ಸಂಖ್ಯೆ: ಆಕುಕ 238 ಸಿಜಿಇ 2025, ದಿನಾಂಕ: 13.05.2025

(2) ಮಾನ್ಯ ತಿಪ್ಪಣ್ಣ ಕಮಕನೂರ, ಶಾಸಕರು, ಕರ್ನಾಟಕ ವಿಧಾನ ಪರಿಷತ್ತು ರವರ ಪತ್ರದ ದಿನಾಂಕ: 11.03.2025

**********

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂದಿಸಿದಂತೆ 44 ಕೋಟಿ ಭಾರತೀಯರಿಗೆ ಬೊಜ್ಜಿನ ಆತಂಕ ಪರಿಸ್ಥಿತಿ ಮುಂದುವರಿದರೆ 2050ಕ್ಕೆ ಪರಿಸ್ಥಿತಿ ಗಂಭೀರವಾಗುವ ಸಾಧ್ಯತೆ ಲ್ಯಾನ್ಸೆಟ್ ವರದಿಯು ತನ್ನ ಜಾಗತಿಕ ವಿಶ್ಲೇಷಣೆಯಲ್ಲಿ ಬಹಿರಂಗಡಿಸಿದೆ.

2050 ರ ವೇಳೆಗೆ ಭಾರತದಲ್ಲಿ 21.8 ಕೋಟಿ ಪುರುಷರು ಮತ್ತು 23.1 ಕೋಟಿ ಮಹಿಳೆಯರು ಸೇರಿದಂತೆ ಒಟ್ಟು 44.9 ಕೋಟಿ ಜನರು ಬೊಜ್ಜಿನ ಸಮಸ್ಯೆಗೆ ತುತ್ತಾಗಲಿದ್ದಾರೆ. ಒಟ್ಟಾರೆ ಜನಸಂಖ್ಯೆ ಸುಮಾರು ಮೂರನೇ ಒಂದು ಭಾಗದಷ್ಟು ಜನರು ಅಧಿಕ ತೂಕ ಮತ್ತು ಬೊಜ್ಜಿನ ಸಮಸ್ಯೆ ಎದುರಿಸಲಿದ್ದಾರೆ ಈ ಮೂಲಕ ಅತೀ ಹೆಚ್ಚು ಬೊಜ್ಜಿನ ಸಮಸ್ಯೆ ಎದುರಿಸಲಿದ್ದಾರೆ ಈ ಮೂಲಕ ಅತೀ ಹೆಚ್ಚು ಬೊಜ್ಜಿನ ಸಮಸ್ಯೆಯಿಂದ ಬಳುತ್ತಿರುವ ಚೀನಾವನ್ನು ಭಾರತ ಹಿಂದಿಕ್ಕಲಿದೆ ಇಂತಹ ಒಂದು ಭಯಾನಕ ವರದಿ ಪ್ರಕಟಣೆಯನ್ನು ಕರ್ನಾಟಕ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು.

ಅಧಿಕ ತೂಕ (Overweight) ಮತ್ತು ಸ್ಥೂಲಕಾಯತೆ (Obesity) ತಡೆ ಹಾಗೂ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳು

ಅಧಿಕ ತೂಕ ಹಾಗೂ ಸ್ಥೂಲಕಾಯತೆ ಹೆಚ್ಚುತ್ತಿರುವುದು ಮತ್ತು ಅವು ಅಸಾಂಕ್ರಾಮಿಕ ರೋಗಗಳ (Non-Communicable Diseases - NCDs) ಅಪಾಯವನ್ನು ಹೆಚ್ಚಿಸುತ್ತಿರುವ ಕುರಿತು ಸರ್ಕಾರವು ಗಂಭೀರವಾಗಿ ಗಮನಹರಿಸಿದೆ.

ಕರ್ನಾಟಕ ಸರ್ಕಾರವು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆ ಮತ್ತು ನಿಯಂತ್ರಣ ಕಾರ್ಯಕ್ರಮ (National Programme for Prevention and Control of Non-Communicable Diseases - NP-NCD) ಅನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿದ್ದು, ಆರೋಗ್ಯ ಪ್ರೋತ್ಸಾಹ, ರೋಗ ತಡೆ, ಆರಂಭಿಕ ಹಂತದಲ್ಲೇ ಪತ್ತೆಹಚ್ಚುವಿಕೆ, ಚಿಕಿತ್ಸೆ ಹಾಗೂ ನಿರಂತರ ಅನುಸರಣೆಗೆ (Follow-up) ವಿಶೇಷ ಆದ್ಯತೆ ನೀಡಲಾಗಿದೆ.

1. ಜನಸಂಖ್ಯೆ ಆಧಾರಿತ ತಪಾಸಣೆ (Population-Based Screening - PBS): ಕಾರ್ಯಕ್ರಮದಡಿ 30 ವರ್ಷ ಮತ್ತು ಮೇಲ್ಪಟ್ಟ ಎಲ್ಲಾ ವ್ಯಕ್ತಿಗಳಿಗೆ ಆಯುಷ್ಮಾನ್

ಆರೋಗ್ಯ ಮಂದಿರಗಳು (Ayushman Arogya Mandirs), ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು, ತಾಲ್ಲೂಕು ಆಸ್ಪತ್ರೆಗಳು ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಜನಸಂಖ್ಯೆ ಆಧಾರಿತ ತಪಾಸಣೆ ನಡೆಸಲಾಗುತ್ತಿದೆ. ತಪಾಸಣೆಯ ಸಂದರ್ಭದಲ್ಲಿ ವ್ಯಕ್ತಿಗಳ ಎತ್ತರ ಹಾಗೂ ತೂಕವನ್ನು ಅಳೆಯಲಾಗುತ್ತಿದ್ದು, ದೇಹದ ತೂಕ ಸೂಚ್ಯಂಕ (Body Mass Index - BMI) ಲೆಕ್ಕ ಹಾಕಲಾಗುತ್ತದೆ. ಇದರ ಆಧಾರದ ಮೇಲೆ ಅಧಿಕ ತೂಕ, ಸ್ಥೂಲಕಾಯತೆ ಹಾಗೂ ಇತರೆ ಅಸಾಂಕ್ರಾಮಿಕ ರೋಗಗಳ ಅಪಾಯಕಾರಕ ಅಂಶಗಳನ್ನು ಹೊಂದಿರುವ ವ್ಯಕ್ತಿಗಳನ್ನು ಗುರುತಿಸಿ, ಅವರಿಗೆ ಜೀವನಶೈಲಿ ಬದಲಾವಣೆ ಕುರಿತು ಸಲಹೆ-ಸೂಚನೆಗಳನ್ನು ನೀಡಲಾಗುತ್ತಿದ್ದು, ಅಗತ್ಯವಿರುವವರಿಗೆ ಸೂಕ್ತ ಚಿಕಿತ್ಸೆಗಾಗಿ ಮೇಲ್ಪರ್ಜೆಯ ಆರೋಗ್ಯ ಸಂಸ್ಥೆಗಳಿಗೆ ಉಲ್ಲೇಖಿಸಲಾಗುತ್ತಿದೆ.

2. ಗೃಹ ಆರೋಗ್ಯ ಯೋಜನೆ (Gruha Arogya Yojane): ರಾಜ್ಯದ ಮಹತ್ವಾಕಾಂಕ್ಷಿ ಗೃಹ ಆರೋಗ್ಯ ಯೋಜನೆ ಅಡಿಯಲ್ಲಿ ಆಶಾ ಕಾರ್ಯಕರ್ತೆಯರು ಮನೆ-ಮನೆಗೆ ಭೇಟಿ ನೀಡಿ ಸಮುದಾಯ ಮಟ್ಟದಲ್ಲಿ ಅಸಾಂಕ್ರಾಮಿಕ ರೋಗಗಳ ಅಪಾಯ ಮೌಲ್ಯಮಾಪನ (Risk Assessment) ನಡೆಸುತ್ತಿದ್ದಾರೆ. ಅಪಾಯದಲ್ಲಿರುವ ವ್ಯಕ್ತಿಗಳನ್ನು ಗುರುತಿಸಿ, ಅವರನ್ನು ಸಮಯೋಚಿತವಾಗಿ ಸರ್ಕಾರಿ ಆರೋಗ್ಯ ಸಂಸ್ಥೆಗಳಿಗೆ ಉಲ್ಲೇಖಿಸಿ ಅಗತ್ಯ ಆರೋಗ್ಯ ಸೇವೆಗಳನ್ನು ಪಡೆಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ.
3. ಮಾಹಿತಿ, ಶಿಕ್ಷಣ ಮತ್ತು ಸಂವಹನ (IEC) ಚಟುವಟಿಕೆಗಳು: ಆರೋಗ್ಯಕರ ಆಹಾರ ಪದ್ಧತಿಯನ್ನು ಅಳವಡಿಸಿಕೊಳ್ಳುವುದು, ನಿಯಮಿತ ದೈಹಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು, ಆರೋಗ್ಯಕರ ದೇಹದ ತೂಕವನ್ನು ಕಾಪಾಡಿಕೊಳ್ಳುವುದು, ಹೆಚ್ಚು ಉಪ್ಪು, ಸಕ್ಕರೆ ಹಾಗೂ ಅನಾರೋಗ್ಯಕರ ಕೊಬ್ಬಿನಾಂಶ ಹೊಂದಿರುವ ಆಹಾರಗಳ ಸೇವನೆಯನ್ನು ಕಡಿಮೆ ಮಾಡುವುದು ಮತ್ತು ತಂಬಾಕು ಹಾಗೂ ಮದ್ಯಪಾನದಂತಹ ದುಶ್ಚಟಗಳಿಂದ ದೂರವಿರುವ ಕುರಿತು ರಾಜ್ಯಾದ್ಯಂತ ನಿರಂತರ ಮಾಹಿತಿ, ಶಿಕ್ಷಣ ಮತ್ತು ಸಂವಹನ (IEC) ಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತಿದೆ. ಆಶಾ ಕಾರ್ಯಕರ್ತೆಯರು, ಸರ್ಕಾರಿ ಆರೋಗ್ಯ ಸಂಸ್ಥೆಗಳು, ಆರೋಗ್ಯ ಶಿಬಿರಗಳು ಹಾಗೂ ಸಮೂಹ ಮಾಧ್ಯಮಗಳ ಮೂಲಕ ಅಸಾಂಕ್ರಾಮಿಕ ರೋಗಗಳಿಗೆ ಸಂಬಂಧಿಸಿದ ವಿವಿಧ ಆರೋಗ್ಯ ದಿನಗಳ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ.
4. ಜೀವನಶೈಲಿ ಬದಲಾವಣೆ ಕುರಿತು ಸಮಾಲೋಚನೆ (Lifestyle Modification Counselling): ಅಸಾಂಕ್ರಾಮಿಕ ರೋಗ ಚಿಕಿತ್ಸಾ ಕ್ಲಿನಿಕ್‌ಗಳು (NCD Clinics), ಆಯುಷ್ಮಾನ್ ಆರೋಗ್ಯ ಮಂದಿರಗಳು ಹಾಗೂ ಇತರೆ ಸರ್ಕಾರಿ ಆರೋಗ್ಯ ಸಂಸ್ಥೆಗಳ ಮೂಲಕ ತರಬೇತಿ ಪಡೆದ ಆರೋಗ್ಯ ಸಿಬ್ಬಂದಿಯಿಂದ ಜೀವನಶೈಲಿ ಬದಲಾವಣೆ ಕುರಿತು ಸಮಾಲೋಚನೆ ಸೇವೆಗಳನ್ನು ನೀಡಲಾಗುತ್ತಿದೆ. ಅಧಿಕ ತೂಕ, ಸ್ಥೂಲಕಾಯತೆ ಅಥವಾ ಇತರೆ ಅಪಾಯಕಾರಕ ಅಂಶಗಳನ್ನು ಹೊಂದಿರುವ ವ್ಯಕ್ತಿಗಳಿಗೆ ಸಮತೋಲಿತ ಆಹಾರ ಸೇವನೆ, ನಿಯಮಿತ ವ್ಯಾಯಾಮ ಹಾಗೂ ಆರೋಗ್ಯಕರ ನಡವಳಿಕೆಗಳನ್ನು ಅಳವಡಿಸಿಕೊಳ್ಳುವ

ಕುರಿತು ಮಾರ್ಗದರ್ಶನ ನೀಡಲಾಗುತ್ತಿದ್ದು, ಮಧುಮೇಹ, ಅಧಿಕ ರಕ್ತದೊತ್ತಡ, ಹೃದಯ ಮತ್ತು ರಕ್ತನಾಳಗಳ ಕಾಯಿಲೆಗಳು ಹಾಗೂ ಇತರೆ ಅಸಾಂಕ್ರಾಮಿಕ ರೋಗಗಳ ಅಪಾಯವನ್ನು ಕಡಿಮೆಗೊಳಿಸುವ ಉದ್ದೇಶದಿಂದ ನಿರಂತರ ಸಲಹೆ-ಸೂಚನೆಗಳನ್ನು ನೀಡಲಾಗುತ್ತಿದೆ.

ರಾಜ್ಯ ಸರ್ಕಾರವು ಅಸಾಂಕ್ರಾಮಿಕ ರೋಗಗಳ ತಡೆ ಮತ್ತು ನಿಯಂತ್ರಣ ಕಾರ್ಯಕ್ರಮವನ್ನು ಇನ್ನಷ್ಟು ಬಲಪಡಿಸುವ ಉದ್ದೇಶದಿಂದ ತರಬೇತಿ ಪಡೆದ ಮಾನವ ಸಂಪನ್ಮೂಲ, ಅಗತ್ಯ ಔಷಧಿಗಳು, ರೋಗನಿರ್ಣಯ ಸೌಲಭ್ಯಗಳು ಹಾಗೂ ಕಾರ್ಯಕ್ರಮದ ಅನುಷ್ಠಾನದ ನಿಯಮಿತ ಮೇಲ್ವಿಚಾರಣೆಯನ್ನು ಖಚಿತಪಡಿಸುತ್ತಿದ್ದು, ಅಧಿಕ ತೂಕ, ಸ್ಥೂಲಕಾಯತೆ ಹಾಗೂ ಇತರೆ ಅಸಾಂಕ್ರಾಮಿಕ ರೋಗಗಳ ಪರಿಣಾಮಕಾರಿ ತಡೆ ಮತ್ತು ನಿಯಂತ್ರಣಕ್ಕಾಗಿ ನಿರಂತರ ಕ್ರಮಗಳನ್ನು ಕೈಗೊಂಡಿರುತ್ತದೆ.